# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 708 |
| ಸದಸ್ಯರ ಹೆಸರು: | ಶ್ರೀ.ಎಂ.ನಾಗರಾಜು (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ: | 12.12. 2025 |
| ಉತ್ತರಿಸುವ ಸಚಿವರು: | ಕೃಷಿ ಸಚಿವರು. |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ರೈತರಿಗೆ ಯಂತ್ರೋಪಕರಣಗಳನ್ನು ಖರೀದಿಸಲು ಸರ್ಕಾರದ ವತಿಯಿಂದ ನೀಡಲಾಗಿರುವ ಸಹಾಯಧನ ಎಷ್ಟು; ಸದರಿ ಯೋಜನೆಯಡಿ ರಾಜ್ಯದ ಎಷ್ಟು ರೈತರು ಸಹಾಯ ಧನ ಪಡೆದಿರುತ್ತಾರೆ.</td><td>
ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ರೈತರಿಗೆ ಯಂತ್ರೋಪಕರಣಗಳನ್ನು ಖರೀದಿಸಲು ಸರ್ಕಾರದ ವತಿಯಿಂದ ನೀಡಲಾಗಿರುವ ಸಹಾಯಧನ ಹಾಗೂ ಸಹಾಯಧನ ಪಡೆದ ರೈತರ ಸಂಖ್ಯೆ ಈ ಕೆಳಕಂಡಂತಿದೆ.
(ಭೌತಿಕ: ಸಂಖ್ಯೆಗಳಲ್ಲಿ, ಆರ್ಥಿಕ:ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ</th><th>ವರ್ಷ</th><th>ನೀಡಲಾದ ಸಹಾಯಧನ</th><th>ಸಹಾಯಧನ ಪಡೆದ ರೈತರ ಸಂಖ್ಯೆ</th></tr>
<tr><td>1.</td><td>2022-23</td><td>29666.49</td><td>53004</td></tr>
<tr><td>2.</td><td>2023-24</td><td>50400.17</td><td>116181</td></tr>
<tr><td>3.</td><td>2024-25</td><td>43354.91</td><td>137435</td></tr>
<tr><td>4.</td><td>2025-26 (ನವೆಂಬರ್ ಅಂತ್ಯಕ್ಕೆ)</td><td>29388.78</td><td>69722</td></tr>
</table>
ಕಳೆದ ಮೂರು ವರ್ಷಗಳಲ್ಲಿ ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಹೈಟೆಕ್ ಹಾರ್ವೆಸ್ಟರ್ ಯಂತ್ರೋಪಕರಣಗಳನ್ನು ಖರೀದಿಸಲು ನೀಡಲಾಗಿರುವ ಸಹಾಯಧನ ಹಾಗೂ ಹಬ್‌ಗಳ ಸಂಖ್ಯೆ ಈ ಕೆಳಕಂಡಂತಿದೆ.
(ಭೌತಿಕ:ಸಂಖ್ಯೆಗಳಲ್ಲಿ, ಆರ್ಥಿಕ: ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ.</th><th>ವರ್ಷ</th><th>ನೀಡಲಾದ ಸಹಾಯಧನ</th><th>ಹಬ್ ಗಳ ಸಂಖ್ಯೆ</th></tr>
<tr><td>1.</td><td>2022-23</td><td>0.00</td><td>0</td></tr>
<tr><td>2.</td><td>2023-24</td><td>4138.34</td><td>103</td></tr>
<tr><td>3.</td><td>2024-25</td><td>8645.09</td><td>237</td></tr>
<tr><td>4.</td><td>2025-26 (ನವೆಂಬರ್ ಅಂತ್ಯಕ್ಕೆ)</td><td>0.00</td><td>0</td></tr>
</table>
ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ರೈತರಿಗೆ ಯಂತ್ರೋಪಕರಣಗಳನ್ನು ಖರೀದಿಸಲು ಜಲಾನಯನ ಅಭಿವೃದ್ಧಿ ಇಲಾಖೆಯಿಂದ ವಿವಿಧ ಜಲಾನಯನ ಯೋಜನೆಗಳಡಿ ನೀಡಲಾಗಿರುವ ಸಹಾಯಧನ ಮತ್ತು ಸಹಾಯಧನ ಪಡೆದಿರುವ ರೈತರ ಸಂಖ್ಯೆ ಈ ಕೆಳಕಂಡಂತಿದೆ:
<table>
<tr><th>ವರ್ಷ</th><th>ಸಹಾಯಧನ (ರೂ.ಲಕ್ಷಗಳಲ್ಲಿ)</th><th>ಸಹಾಯಧನ ಪಡೆದಿರುವ ರೈತರ ಸಂಖ್ಯೆ</th></tr>
<tr><td>2022-23</td><td>1604.106</td><td>4398</td></tr>
<tr><td>2023-24</td><td>823.86</td><td>2823</td></tr>
<tr><td>2024-25</td><td>1325.31</td><td>4953</td></tr>
<tr><td>ಒಟ್ಟು</td><td>3753.276</td><td>12174</td></tr>
</table>
</td></tr>
</table>

| | | |
|---|---|---|
| ಆ) | ಸರ್ಕಾರದ ವತಿಯಿಂದ ಜೈವಿಕ ಗೊಬ್ಬರ ಮತ್ತು ಮಣ್ಣು ಪರೀಕ್ಷೆ ಕುರಿತು ರಾಜ್ಯದ ರೈತರಲ್ಲಿ ಜಾಗೃತಿ ಮೂಡಿಸಲು ಕೈಗೊಂಡಿರುವ ಕ್ರಮವೇನು; | ಕೃಷಿಯಲ್ಲಿ ಜೈವಿಕ ಗೊಬ್ಬರಗಳನ್ನು ಉತ್ತೇಜಿಸಲು ಇಲಾಖೆ ಹಾಗೂ ಕೃಷಿ ವಿಶ್ವವಿದ್ಯಾನಿಲಯಗಳಿಂದ ರೈತರಿಗೆ ಆನ್‌ಲೈನ್ ಹಾಗೂ ಸಾಂಸ್ಥಿಕ ತರಬೇತಿಗಳು, ಪ್ರಾತ್ಯಕ್ಷಿಕೆಗಳು, ಪ್ರಗತಿಪರ ಸಾವಯವ ಕೃಷಿಕರಿಗೆ ಮಾದರಿ ಕ್ಷೇತ್ರಗಳ ಭೇಟಿ, ಜೈವಿಕ ಗೊಬ್ಬರ ಬಳಕೆ ಮಾಡುತ್ತಿರುವ ರೈತರ ಅನುಭವ ಹಂಚಿಕೆ ಮಾಡಿಸುವುದರ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ. ಅಲ್ಲದೇ ಇಲಾಖೆಯ ವಿವಿಧ ಯೋಜನೆಗಳಡಿ ಜೈವಿಕ ಗೊಬ್ಬರಗಳನ್ನು ಶೇ.50 ರ ರಿಯಾಯಿತಿ ದರದಲ್ಲಿ ರೈತ ಸಂಪರ್ಕ ಕೇಂದ್ರಗಳ ಮೂಲಕ ವಿತರಿಸಲಾಗುತ್ತಿದೆ.<br>ಇಲಾಖೆಯ ವಿವಿಧ ಯೋಜನೆಗಳಡಿ ಮಣ್ಣು ಪರೀಕ್ಷೆ ಆಧಾರದ ಮೇಲೆ ಬೆಳೆವಾರು ಸಮಗ್ರ ಪೋಷಕಾಂಶಗಳ ಪ್ರಮಾಣಗಳ ಶಿಫಾರಸ್ಸುಗಳನ್ನು ಒಳಗೊಂಡ ಮಣ್ಣು ಆರೋಗ್ಯ ಕಾರ್ಡ್‌ಗಳನ್ನು ವಿತರಿಸಲಾಗುತ್ತಿದೆ. ಮಣ್ಣಿನ ಆರೋಗ್ಯ ಸುಧಾರಿಸಲು ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ಮಣ್ಣು ಆರೋಗ್ಯ ಕಾರ್ಡ್‌ಗಳಲ್ಲಿ ನೀಡಲಾಗಿರುವ ಶಿಫಾರಸ್ಸುಗಳನ್ವಯ ರಸಗೊಬ್ಬರಗಳ ಬಳಕೆಯ ಬಗ್ಗೆ ರೈತರಲ್ಲಿ ಅರಿವು ಮೂಡಿಸಲಾಗುತ್ತಿದ್ದು, 2022-23ನೇ ಸಾಲಿನಿಂದ 11.51 ಲಕ್ಷ ಮಣ್ಣು ಆರೋಗ್ಯ ಕಾರ್ಡ್ ಗಳನ್ನು ವಿತರಿಸಲಾಗಿದೆ. |
| ಇ) | ರಾಜ್ಯದಲ್ಲಿ ಹವಾಮಾನ ಬದಲಾವಣೆ ಸಂದರ್ಭದಲ್ಲಿ ಕೃಷಿ ತಂತ್ರಜ್ಞಾನ ಮತ್ತು ಬೆಳೆ ರಕ್ಷಣೆ ಕುರಿತು ರೈತರಲ್ಲಿ ಜಾಗೃತಿ ಮೂಡಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು; | • ಹವಾಮಾನ ಬದಲಾವಣೆ ಸಂದರ್ಭದಲ್ಲಿ ಹವಾಮಾನ ವೈಪರೀತ್ಯದಿಂದ ಮುಂಗಾರು ಹಂಗಾಮು ತಡವಾದಾಗ "ಪರ್ಯಾಯ ಬೆಳೆ ಯೋಜನೆ" ಯನ್ನು ರೂಪಿಸಲಾಗುತ್ತಿದ್ದು, ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳು ಪರ್ಯಾಯ ಬೆಳೆಗಳನ್ನು ಬೆಳೆಯಲು ರೈತರಿಗೆ ಮಾಹಿತಿ ನೀಡುತ್ತಿದ್ದು, ಜಿಲ್ಲಾಡಳಿತದ ಸಹಯೋಗದೊಂದಿಗೆ ವ್ಯಾಪಕ ಪ್ರಚಾರವನ್ನು ಇಲಾಖೆಯಿಂದ ಕೈಗೊಳ್ಳಲಾಗುತ್ತಿದೆ.<br>• ಹವಾಮಾನ ಬದಲಾವಣೆಯಿಂದಾಗಿ ಬೆಳೆಗೆ ಕೀಟ ರೋಗ ಬರದಂತೆ ತಡೆಯಲು ಜೈವಿಕ ಪೀಡೆನಾಶಕಗಳು ಹಾಗೂ ಸಸ್ಯ ಸಂರಕ್ಷಣಾ ಔಷಧಿಗಳನ್ನು ಶೇ 50ರ ಸಹಾಯಧನದಲ್ಲಿ ರೈತರಿಗೆ ವಿತರಿಸಲಾಗುತ್ತದೆ.<br>• ಹವಾಮಾನ ಏರಿಳಿತಗಳ ಬಗ್ಗೆ ಇಲಾಖೆಯ ಅಧಿಕಾರಿಗಳು , ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳೊಂದಿಗೆ ಹಾಗೂ ರೈತರೊಂದಿಗೆ ಮಾಹಿತಿ ವಿನಿಮಯ ಮಾಡಿಕೊಳ್ಳಲಾಗುತ್ತಿದೆ. ಅಲ್ಲದೇ ರೈತರಿಗೆ ಕ್ಷೇತ್ರೋತ್ಸವ ಕಾರ್ಯಕ್ರಮಗಳನ್ನು ಏರ್ಪಡಿಸಿ, ಪ್ರಗತಿಪರ ರೈತರಿಂದ ಹಲವು ವಿಚಾರ-ವಿನಿಮಯ ಸಭೆಗಳನ್ನು ಆಯೋಜಿಸಲಾಗುತ್ತಿದೆ.<br>• ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದಿಂದ (KSNDMC) ಮಳೆ ಹಾಗೂ ಹವಾಮಾನ ಮುನ್ಸೂಚನೆ ಕುರಿತು ರೈತರಿಗೆ ವ್ಯಾಟ್ಸ್ ಆಪ್ ಗ್ರೂಪ್ ಮತ್ತು ಸ್ಥಳೀಯ ಪತ್ರಿಕೆಗಳಲ್ಲಿ, ರೇಡಿಯೋ ಕಾರ್ಯಕ್ರಮಗಳ ಮೂಲಕ ಸಂದೇಶ ರವಾನಿಸಲಾಗುತ್ತದೆ. ಬಿತ್ತನೆ ಹಾಗೂ ಕಟಾವಿಗೆ ಸಿದ್ಧತೆ ಮಾಡಿಕೊಳ್ಳಲು ಸಲಹೆಗಳನ್ನು ನೀಡಲಾಗುತ್ತಿದೆ.<br>• ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟವಾದರೆ ಪರಿಹಾರ ಪಡೆಯಲು 'ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ' (PMFBY) ಅಡಿಯಲ್ಲಿ ನೋಂದಣಿ ಮಾಡಿಸುವ ಬಗ್ಗೆ ಮತ್ತು 72 |

| | | |
|---|---|---|
| | | ಗಂಟೆಯೊಳಗೆ ದೂರು ನೀಡುವ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.<br>• ಹವಾಮಾನ ಇಲಾಖೆಯು "ಹವಾಮಾನ ವೈಪರಿತ್ಯದ" ಬಗ್ಗೆ ಮುನ್ಸೂಚನೆ ನೀಡಿದ ತಕ್ಷಣ ಕೃಷಿ ಇಲಾಖೆಯ ವತಿಯಿಂದ ಅಧಿಕೃತ ಪತ್ರಿಕಾ ಪ್ರಕಟಣೆಯ ಮೂಲಕ ರೈತರಿಗೆ ಅರಿವು ಮೂಡಿಸುವುದರ ಜೊತೆಗೆ ಇ-ಸ್ಯಾಪ್ ಮೂಲಕ ರೈತರಿಗೆ ಕೀಟ/ರೋಗ ಭಾದೆ ಹಾಗೂ ಪೋಷಕಾಂಶಗಳ ನಿರ್ವಹಣೆ ಕುರಿತಂತೆ ಸಹ ಮಾಹಿತಿ ನೀಡಲಾಗುತ್ತಿದೆ.<br>**ಕೃಷಿ ಭಾಗ್ಯ ಯೋಜನೆ:** ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಲು ಜನಪ್ರಿಯವಾಗಿದ್ದ ಕೃಷಿ ಭಾಗ್ಯ ಯೋಜನೆಯನ್ನು 2023-24ನೇ ಸಾಲಿನಲ್ಲಿ ಮರು ಜಾರಿಗೊಳಿಸಲಾಗಿದ್ದು, ರಾಜ್ಯಾದ್ಯಾಂತ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಹೊಂಡ ಹಾಗೂ ಪೂರಕ ಘಟಕಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯ ಮುಖಾಂತರ ಬರ ನಿರ್ವಹಣೆಗಾಗಿ ಕಂದಾಯ ಇಲಾಖೆಯಿಂದ ರಾಜ್ಯ ವಿಪತ್ತು ನಿರ್ವಹಣೆ ಯೋಜನೆಯಡಿ ಕೃಷಿ ಇಲಾಖೆಗೆ ಅನುದಾನ ಒದಗಿಸಲಾಗುತ್ತಿದೆ. ಕೃಷಿ ಭಾಗ್ಯ ಯೋಜನೆಯನ್ನು ಪುರಸ್ಕರಿಸಿ ರಾಷ್ಟ್ರೀಯ ವಿಪತ್ತು ಉಪಶಮನ ನಿಧಿಯಡಿ ರಾಜ್ಯದ 5 ಬರಪೀಡಿತ ಜಿಲ್ಲೆಗಳಲ್ಲಿ ಯೋಜನೆ ಅನುಷ್ಠಾನಗೊಳಿಸುವ ಕ್ರಿಯಾ ಯೋಜನೆಗೆ ಕೇಂದ್ರ ಸರ್ಕಾರವು ಅನುಮೋದನೆ ನೀಡಿದೆ. |
| ಈ) | ಸಾವಯವ ಕೃಷಿ ಮತ್ತು ಪರಿಸರ ಸ್ನೇಹಿ ಕೃಷಿ ತಂತ್ರಗಳ ಪ್ರಚಾರಕ್ಕಾಗಿ ಕೈಗೊಂಡಿರುವ ಕ್ರಮಗಳಾವುವು? (ಮಾಹಿತಿ ನೀಡುವುದು) | ಸಾವಯವ ಕೃಷಿ ಮತ್ತು ಪರಿಸರ ಸ್ನೇಹಿ ಕೃಷಿ ತಂತ್ರಜ್ಞಾನಗಳ ಪ್ರಚಾರಕ್ಕಾಗಿ ರಾಜ್ಯದಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>1. **ಜೋಯಿಡಾ ತಾಲ್ಲೂಕನ್ನು** ಮುಂದಿನ ಮೂರು ವರ್ಷಗಳಲ್ಲಿ ರಾಜ್ಯದ ಪ್ರಥಮ ಸಾವಯವ ತಾಲ್ಲೂಕನ್ನಾಗಿ ಪರಿವರ್ತಿಸಿ ರೈತರ ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲು ಸಾವಯವ ಪ್ರಮಾಣೀಕರಣ ವ್ಯವಸ್ಥೆ ಕಲ್ಪಿಸುವ ಜೊತೆಗೆ ಗೋಡೆಬರಹ, ಕರಪತ್ರ, ಬೀದಿನಾಟಕ, ಸಾವಯವ ಕೃಷಿ ಕುರಿತ ಪುಸ್ತಕಗಳ ಮೂಲಕ ಅರಿವು ಮೂಡಿಸಲು ಪ್ರಚಾರ ಕೈಗೊಳ್ಳಲಾಗಿರುತ್ತದೆ. ಅಲ್ಲದೇ ಸಾವಯವ ಕೃಷಿ ಪದ್ಧತಿ ಕುರಿತು ತರಬೇತಿ ಕಾರ್ಯಕ್ರಮಗಳನ್ನು ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಆಯೋಜಿಸಲಾಗಿರುತ್ತದೆ.<br>2. **"ಸಾವಯವ ಇಂಗಾಲ ಅಭಿಯಾನ"** ಯೋಜನೆಯಡಿ ಹಸಿರೆಲೆ ಗೊಬ್ಬರ ಬೀಜಗಳಾದ ಸನ್ ಹೆಂಪ್ ಮತ್ತು ಡಯಾಂಚ ಬೀಜಗಳನ್ನು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಅಥವಾ ಪ್ರತಿ ಹೆಕ್ಟೇರಿಗೆ ಗರಿಷ್ಠ ರೂ.3000/- ರಂತೆ ಪ್ರತಿ ರೈತರಿಗೆ ಎರಡು ಹೆಕ್ಟೇರ್ ವಿಸ್ತೀರ್ಣಕ್ಕೆ ಸಹಾಯಧನ ಸೀಮಿತಗೊಳಿಸಿ ನೀಡಲಾಗುತ್ತಿದೆ. ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವ ಉದ್ದೇಶದೊಂದಿಗೆ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳುವ ರೈತರಿಗೆ ಪ್ರತಿ ಹೆಕ್ಟೇರ್'ಗೆ ಗರಿಷ್ಠ ರೂ.2500/- ಮೀರದಂತೆ ಹಸಿರೆಲೆ ಗೊಬ್ಬರ ಬೀಜಗಳನ್ನು ಒದಗಿಸಲಾಗುತ್ತಿದೆ. |

<table>
<tr>
<td></td>
<td></td>
<td>
3. ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮದ ಮೂಲಕ ಸ್ಥಳೀಯ ದೇಸಿ ತಳಿಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಉತ್ತೇಜನ ನೀಡುವುದರ ಜೊತೆಗೆ ದಿನಪತ್ರಿಕೆಗಳಲ್ಲಿ ಜಾಹೀರಾತು, ಜಿಲ್ಲೆಗಳಲ್ಲಿ ಕಾರ್ಯಾಗಾರ ಮತ್ತು ರಾಜ್ಯ /ಜಿಲ್ಲಾ ಮಟ್ಟಗಳಲ್ಲಿ ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆ, ITF 2025 ರಲ್ಲಿ ರೈತರ ಮೂಲಕವೇ ದೇಸಿತಳಿ ಪೆವಿಲಿಯನ್ ಸ್ಥಾಪನೆ ಮುಂತಾದವುಗಳ ಮೂಲಕ ಪ್ರಚಾರ ಕೈಗೊಳ್ಳಲಾಗಿರುತ್ತದೆ.<br><br>
4. ರಾಜ್ಯದ ಸಾವಯವ ಹಾಗೂ ಸಿರಿಧಾನ್ಯ ಉತ್ಪಾದಕರಿಗೆ, ಮಾರಾಟಗಾರರಿಗೆ ಹಾಗೂ ಗ್ರಾಹಕರಿಗೆ ಅನುಕೂಲವಾಗುವಂತೆ ಸಾವಯವ ಹಾಗೂ ಸಿರಿಧಾನ್ಯ ಹಬ್ ಅನ್ನು ಸ್ಥಾಪಿಸಲಾಗುತ್ತಿದ್ದು, ಇದರಿಂದ ಸಾವಯವ ಹಾಗೂ ಸಿರಿಧಾನ್ಯ ಉತ್ಪನ್ನಗಳ ಬಗ್ಗೆ ಗ್ರಾಹಕರಲ್ಲಿ ಅರಿವು ಮೂಡಿಸುವುದರ ಜೊತೆಗೆ ಉತ್ಪಾದಕರಿಗೆ ಉತ್ತಮ ಮಾರುಕಟ್ಟೆ ಕಲ್ಪಿಸಲು ಸಹಕಾರಿಯಾಗಲಿದೆ.<br><br>
5. ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ: ಕೇಂದ್ರ ಪುರಸ್ಕೃತ ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಯೋಜನೆಯನ್ನು ರಾಜ್ಯದ 990 ಗುಚ್ಛಗಳ (Cluster) 49500 ಹೆ. ಪ್ರದೇಶದಲ್ಲಿ 123750 ರೈತರನ್ನು ನೈಸರ್ಗಿಕ ಕೃಷಿಗೆ ಒಳಪಡಿಸುವ ಗುರಿಯೊಂದಿಗೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. ನೈಸರ್ಗಿಕ ಕೃಷಿ ಕುರಿತು ಅರಿವು ಮೂಡಿಸುವ ಓರಿಯಂಟೇಶನ್ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗಿರುತ್ತದೆ.<br><br>
6. ರೈತಸಿರಿ ಮತ್ತು ಸಿರಿಧಾನ್ಯ ಉತ್ತೇಜನ ಕಾರ್ಯಕ್ರಮಗಳು: ರಾಜ್ಯದ ಸಿರಿಧಾನ್ಯ ಕ್ಷೇತ್ರವನ್ನು ವಿಸ್ತರಿಸುವ ನಿಟ್ಟಿನಲ್ಲಿ ಪ್ರಮುಖ ಸಿರಿಧಾನ್ಯ ಬೆಳೆಗಳನ್ನು ಬೆಳೆಯುವ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರತಿ ಹೆಕ್ಟೇರ್ ಗೆ ರೂ. 10,000/- ಗಳಂತೆ ಗರಿಷ್ಠ 2 ಹೆಕ್ಟೇರ್ ಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.<br><br>
7. ಸಾವಯವ ಕೃಷಿ ಉತ್ತೇಜನ ಕಾರ್ಯಕ್ರಮಗಳು:<br>
➢ ಸಾವಯವ ಮತ್ತು ಸಿರಿಧಾನ್ಯ ಕೃಷಿ ಕುರಿತು ರೈತರು, ಗ್ರಾಹಕರು ಹಾಗೂ ಪಾಲುದಾರರಲ್ಲಿ ಅರಿವು ಮೂಡಿಸಲು ಸಾವಯವ ಮತ್ತು ಸಿರಿಧಾನ್ಯ ಮೇಳಗಳನ್ನು 2017 ರಿಂದ ಅಂತರರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಮತ್ತು ಜಿಲ್ಲಾ ಮಟ್ಟಗಳಲ್ಲಿ ವಾಣಿಜ್ಯ ಮೇಳಗಳನ್ನು ಆಯೋಜಿಸಲಾಗುತ್ತಿದೆ.<br>
➢ ಕೃಷಿ ವಿಶ್ವ ವಿದ್ಯಾನಿಲಯಗಳಲ್ಲಿ ಆಯೋಜಿಸಲಾಗುವ ಕೃಷಿ ಮೇಳಗಳಲ್ಲಿ ಸಾವಯವ ಮತ್ತು ನೈಸರ್ಗಿಕ ಪೆವಿಲಿಯನ್ -ಗಳನ್ನು ಸ್ಥಾಪಿಸಲಾಗಿರುತ್ತದೆ.
</td>
</tr>
</table>

ಸಂಖ್ಯೆ:AGRI/164/ASC/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು